ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 35 ಇಟಿಆರ್ 2021

ಕರ್ನಾಟಕ ಸರ್ಕಾರದ ಸಚಿವಾಲಯ
6ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು,
ದಿನಾಂಕ: 25/06/2021.

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ 4)ರ 16ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಮಾಡಲು ಉದ್ದೇಶಿಸಿರುವ ಈ ಮುಂದಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 18ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೂಲಕ ಅಗತ್ಯಪಡಿಸಲಾದಂತೆ, ಅದರಿಂದ ಬಾಧಿತರಾಗಲು ಸಂಭವವಿರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ದಿನಾಂಕ:03-06-2021ರಂದು ಪ್ರಕಟಿಸಿದೆ. ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಏಳು ದಿನದೊಳಗಾಗಿ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಆಹ್ವಾನಿಸಿರುವುದರಿಂದ ಮತ್ತು ಸಾರ್ವಜನಿಕರಿಂದ ಸ್ವೀಕರಿಸಲಾದ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರವು ಪರಿಗಣಿಸಿದೆ.

ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಮತ್ರಣ) ಅಧಿನಿಯಮ 2020ರ (2020ರ ಕರ್ನಾಟಕ ಅಧಿನಿಯಮ ಸಂಖ್ಯೆ.4) 18ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2020 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಮುಂದಿನ ನಿಯಮವನ್ನು ರಚಿಸುತ್ತದೆ. ಎಂದರೆ:-

## ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ.**- (1) ಈ ನಿಯಮಗಳನ್ನು, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು 2021 ಎಂದು ಕರೆಯತಕ್ಕದ್ದು.

(2) ಅವು, ಸರ್ಕಾರಿ ರಾಜ್ಯಪತ್ರದಲ್ಲಿ ಅವುಗಳ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ನಿಯಮ 6ಎ **ಸೇರ್ಪಡೆ:**- ಕರ್ನಾಟಕ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು, 2020ರ ನಿಯಮ 6ರ ನಂತರ ಈ ಮುಂದಿನ ನಿಯಮವನ್ನು ಸೇರಿಸತಕ್ಕದ್ದು, ಎಂದರೆ:-

**೬ಎ. ವಿಶೇಷ ಕೌನ್ಸಿಲಿಂಗ್**: ಸದರಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದಾಗ್ಯೂ ದಿನಾಂಕ 29/04/2021ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ 2021 (ಇಲ್ಲಿ ಇನ್ನು ಮುಂದೆ 2021 ಅಧ್ಯಾದೇಶ 4 ಎಂದು ಕರೆಯಲಾಗುತ್ತದೆ) ನಂತರದ ದಿನಾಂಕದಲ್ಲಿ ನಡೆಯುವ ಪ್ರಥಮ ವರ್ಗಾವಣೆಗಳಿಗೆ ಮೊದಲು ದಿನಾಂಕ:29/04/2021ರ ಅಧ್ಯಾದೇಶದಲ್ಲಿನ ಸೂಚನೆಗನುಸಾರ ವಿಶೇಷ ಕೌನ್ಸಿಲಿಂಗ್ ಅನ್ನು ಹಮ್ಮಿಕೊಂಡು 2019-20ನೇ ಸಾಲಿನಲ್ಲಿ ಕಡ್ಡಾಯ ವರ್ಗಾವಣೆ, ವಲಯ ವರ್ಗಾವಣೆ ಅಥವಾ ಸಮರ್ಪಕ ಮರುಹಂಚಿಕೆಯ ಮೇರೆಗೆ ವರ್ಗಾವಣೆಗಳಲ್ಲಿ ಸ್ಥಳ ಆಯ್ಕೆ ಮಾಡಿಕೊಂಡು ಕರ್ತವ್ಯಕ್ಕೆ ಹಾಜರಾದ ಶಿಕ್ಷಕರಿಗೆ ವರ್ಗಾವಣೆ ಪೂರ್ವದಲ್ಲಿ ಎಲ್ಲಿ ಕೆಲಸ ನಿರ್ವಹಿಸುತ್ತಿದ್ದರೋ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸಂಬಂಧಪಟ್ಟಂತೆ ಆ ಸಂಬಂಧಪಟ್ಟ ತಾಲ್ಲೂಕು ಅಥವಾ ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಪಟ್ಟಂತೆ ಆ ಸಂಬಂಧಪಟ್ಟ ಜಿಲ್ಲೆಯ ಒಳಗೆ ಸ್ಥಳನಿಯುಕ್ತಿಯ ಪ್ರಯೋಜನವನ್ನು ನೀಡುವುದಕ್ಕಾಗಿ ಎಲ್ಲಾ ಇತರೆ ರೀತಿಯ ವರ್ಗಾವಣೆಗಳಿಗೆ ಪೂರ್ವದಲ್ಲಿ ಖಾಲಿ ಹುದ್ದೆಗಳ ಲಭ್ಯತೆಗೆ ಒಳಪಟ್ಟು ಅವರು ಕಾರ್ಯನಿರ್ವಹಿಸುತ್ತಿದ್ದ ತಾಲ್ಲೂಕು ಅಥವಾ ಜಿಲ್ಲೆಯ ಒಳಗೆ ಒಂದು ಸಲದ ಕ್ರಮವಾಗಿ ಕೆಳಗಿನ ಮಾದರಿಯಲ್ಲಿ ವರ್ಗಾವಣೆ ಸ್ಥಳವನ್ನು ಆಯ್ಕೆ ಮಾಡಲು ಅವಕಾಶವನ್ನು ಒದಗಿಸತಕ್ಕದ್ದು.

1) 2019-20ರಲ್ಲಿ ಅಂತಹ ಕಡ್ಡಾಯ ವರ್ಗಾವಣೆ, ವಲಯ ವರ್ಗಾವಣೆ ಅಥವಾ ಸಮರ್ಪಕ ಮರುಹಂಚಿಕೆಯ ಮೇರೆಗೆ ವರ್ಗಾವಣೆಗಳ ಕೌನ್ಸಿಲಿಂಗ್ ಅನ್ನು ಹಮ್ಮಿಕೊಂಡ ಪ್ರಾಧಿಕಾರಿಯವರ ಹಂತದಲ್ಲಿಯೇ ಪ್ರಸ್ತುತದ ಕೌನ್ಸಿಲಿಂಗ್ ಅನ್ನು ಹಮ್ಮಿಕೊಳ್ಳತಕ್ಕದ್ದು.
2) ಈ ಬಗ್ಗೆ ಕೌನ್ಸಿಲಿಂಗ್ ವೇಳಾ ಪಟ್ಟಿಯನ್ನು ಹಾಗೂ ಮಾರ್ಗಸೂಚಿ ಅಂಶಗಳನ್ನು ವರ್ಗಾವಣೆ ನಿಯಂತ್ರಣಾಧಿಕಾರಿಯವರು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಅನುಮೋದನೆಯೊಂದಿಗೆ ಹೊರಡಿಸತಕ್ಕದ್ದು.
3) ವೇಳಾ ಪಟ್ಟಿಗನುಸಾರ ಮೊದಲು ವಿಶೇಷ ಕೌನ್ಸಿಲಿಂಗ್‌ಗಾಗಿ ಲಭ್ಯವಿರುವ ಖಾಲಿ ಹುದ್ದೆಗಳ ಪಟ್ಟಿಯನ್ನು ಪ್ರಕಟಿಸತಕ್ಕದ್ದು.
4) ನಂತರದಲ್ಲಿ 2019-20ನೇ ಸಾಲಿನಲ್ಲಿನ ಕಡ್ಡಾಯ ವರ್ಗಾವಣೆ, ವಲಯ ವರ್ಗಾವಣೆ ಅಥವಾ **ಸಮರ್ಪಕ ಮರುಹಂಚಿಕೆಯ** ಮೇರೆಗೆ ವರ್ಗಾವಣೆಗಳಲ್ಲಿನ 2021ರ ಅಧ್ಯಾದೇಶ ಸಂಖ್ಯೆ 4ರಲ್ಲಿ ಹೇಳಿದಂತೆ ಬಾಧಿತ ಶಿಕ್ಷಕರಿಂದ ಆನ್-ಲೈನ್‌ನಲ್ಲಿ ವಿಶೇಷ ಕೌನ್ಸಿಲಿಂಗ್ ಅವಕಾಶವನ್ನು ಪಡೆಯಲನುವಾಗುವಂತೆ ಅರ್ಜಿಯನ್ನು ಆಹ್ವಾನಿಸತಕ್ಕದ್ದು.
5) ಸದರಿ ಬಾಧಿತ ಶಿಕ್ಷಕರು ಆನ್-ಲೈನ್ ನಲ್ಲಿ ವಿಶೇಷ ಕೌನ್ಸಿಲಿಂಗ್‌ಗೆ ಸಂಬಂಧಪಟ್ಟಂತೆ ಕೋರಿಕೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
6) ಹಾಗೆ, ಆನ್-ಲೈನ್ ನಲ್ಲಿ ಸ್ವೀಕೃತವಾಗಿರುವ/ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು 2019-20ರಲ್ಲಿ ಕೌನ್ಸಿಲಿಂಗ್ ಕ್ರಮಾಂಕವನ್ನು ನಿರ್ಧರಿಸುವ ಸಂಬಂಧ ಜಾರಿಯಲ್ಲಿದ್ದ ನಿಯಮಗಳಂತೆ ಕೌನ್ಸಿಲಿಂಗ್ ಜ್ಯೇಷ್ಠತಾ ಕ್ರಮಾಂಕವನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಕರೆದು ಅಂತಿಮಗೊಳಿಸತಕ್ಕದ್ದು ಹಾಗೂ ಅದೇ ಜ್ಯೇಷ್ಠತಾ ಕ್ರಮಾಂಕದಲ್ಲಿಯೇ ಅಂತಹ ಎಲ್ಲಾ ಬಾಧಿತ ಶಿಕ್ಷಕರಿಗೆ ಕೌನ್ಸಿಲಿಂಗ್ ಅನ್ನು ಮಾಡತಕ್ಕದ್ದು.

7) ಹೆಚ್ಚುವರಿಗೊಂಡಿರುವ ಪ್ರಕರಣಗಳಲ್ಲಿ ವಲಯ ನಿರ್ಬಂಧ ಇರುವುದಿಲ್ಲ. ಆದರೆ, ಕಡ್ಡಾಯ ವರ್ಗಾವಣೆಗೊಂಡ ಶಿಕ್ಷಕರು ಬಿ ಅಥವಾ ಸಿ ವಲಯದ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರತಕ್ಕದ್ದು. ಆದರೆ, ಬಿ ಮತ್ತು ಸಿ ವಲಯಗಳಲ್ಲಿ ಯಾವುದೇ ಖಾಲಿ ಹುದ್ದೆ ಲಭ್ಯವಿಲ್ಲದೇ ಇದ್ದಲ್ಲಿ ಎ ವಲಯದ ಲಭ್ಯ ಶಾಲೆಗಳನ್ನು ಆಯ್ಕೆಗೆ ನೀಡಬಹುದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಹೆಚ್. ಎಸ್. ಶಿ

**(ಹೆಚ್.ಎಸ್. ಶಿವಕುಮಾರ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಾಥಮಿಕ)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಬೆಂಗಳೂರು, ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು ಇದರ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಡಾ॥ ಅಂಬೇಡ್ಕರ್ ವೀದಿ, 6ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560001 ಇವರಿಗೆ ಸಲ್ಲಿಸಲು ಕೋರಿದೆ.

**ಪ್ರತಿಗಳು:**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು- 560001
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
3. ನಿರ್ದೇಶಕರು, (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001.
4. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001.
5. ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಮಲ್ಲೇಶ್ವರಂ, ಬೆಂಗಳೂರು ಹಾಗೂ ಶಿಕ್ಷಕರ ವರ್ಗಾವಣೆ ಸೆಲ್‌ನ ಮುಖ್ಯಸ್ಥರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು ಮತ್ತು ಉಪ ನಿರ್ದೇಶಕರು.
7. ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು.

8. ಅಧೀನ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನ ಸೌಧ.

9. ಶಿಕ್ಷಣ ಇಲಾಖೆಯ ಅಪರ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ಎಲ್ಲಾ ಅಧೀನ ಕಾರ್ಯದರ್ಶಿಗಳು.

10. ಶಿಕ್ಷಣ ಇಲಾಖೆಯ ಎಲ್ಲಾ ಶಾಖಾಧಿಕಾರಿಗಳು.

11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.